ಪುನರ್ವಸತಿ ಕೇಂದ್ರಗಳಲ್ಲಿ ಪ್ರೌಢ ಶಾಲೆ ಪ್ರಾರಂಭಿಸುವುದು

1001 (1327) ಶ್ರೀ ಪಾಟೀಲ್ ಜೆ.ಟಿ. (ಬೀಳಗಿ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪುನರ್ವಸತಿ ಕೇಂದ್ರಗಳಲ್ಲಿ 2002-2003ನೇ ಸಾಲಿನಲ್ಲಿ ಹೊಸದಾಗಿ 15 ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ಜಿಲ್ಲಾ ಉಸ್ತುವಾರಿ ಸಚಿವರಾದ ನೀರಾವರಿ ಸಚಿವರು ಹಾಗೂ ಈಗಿನ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಪಾಲ್ಗೊಂಡ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಕಳೆದ 3 ವರ್ಷಗಳಿಂದ ಬೀಳಗಿ ಕ್ಷೇತ್ರದ ಅಲಗೂರು ಪುನರ್ವಸತಿ ಕೇಂದ್ರ ಹಾಗೂ ಹಿರೇಪಡಸಲಾಗಿ ಮುಳುಗಡೆ ಗ್ರಾಮದಲ್ಲಿ ಹಾಗೂ ಕಾತರಕಿ ಗ್ರಾಮದಲ್ಲಿ ಪ್ರೌಢ ಶಾಲೆ ಪ್ರಾರಂಭಿಸಲು ಒತ್ತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಅಲಗೂರು, ಹಿರೇಪಡಸಲಗಿ, ಕಾತರಕಿ (ಕ್ಷೇತ್ರ ಬೀಳಗಿ) ಗ್ರಾಮಗಳಿಗೆ ಸರ್ಕಾರಿ ಪ್ರೌಢಶಾಲೆಗಳನ್ನು 2003 ಜೂನ್ ರಿಂದ ಪ್ರಾರಂಭಿಸಲು ಸರ್ಕಾರ ಆದೇಶ ಮಾಡುವುದೇ?

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು) :

ಅ) ಬಂದಿದೆ

ಆ) ಬಂದಿದೆ

ಇ) ಪರಿಶೀಲಿಸಲಾಗುತ್ತಿದೆ

ಮುಳುಗಡೆ ವ್ಯಾಪ್ತಿಯಲ್ಲಿ ಬರುವ ಪುನರ್ವಸತಿ ಕೇಂದ್ರಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಾರಂಭಿಸುವುದು

1002 (1328) ಶ್ರೀ ಪಾಟೀಲ್ ಜೆ.ಟಿ. (ಬೀಳಗಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಮುಳುಗಡೆ ವ್ಯಾಪ್ತಿಯಲ್ಲಿ ಬರುವ ಪುನರ್ವಸತಿ ಕೇಂದ್ರಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

2) ಕಳೆದ 3 ವರ್ಷಗಳಿಂದ ಸರ್ಕಾರವನ್ನು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸಲು ಒತ್ತಾಯಿಸಿದ್ದರೂ ಪ್ರಾರಂಭ ಮಾಡದೇ ಇರುವ ಕಾರಣಗಳೇನು?

3) 2002-03ನೇ ಸಾಲಿನಲ್ಲಾದರೂ ಪುನರ್ವಸತಿ ಕೇಂದ್ರಗಳಲ್ಲಿ ಅವಶ್ಯಕತೆ ಇದ್ದ ಸ್ಥಳಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

1) ಬಂದಿದೆ

2) ಭಾರತ ಸರ್ಕಾರವು ಸೂಚಿಸಿರುವ ಮಾರ್ಗ ಸೂಚಿಯ ಪ್ರಕಾರ ಬಾಗಲಕೋಟೆ ಜಿಲ್ಲೆಗೆ ಜನಸಂಖ್ಯೆ ಪ್ರಕಾರ 39 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಅವಶ್ಯಕತೆ ಇರುತ್ತದೆ. ಆದರೆ ಈಗಾಗಲೇ 46 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಅಸ್ತಿತ್ವದಲ್ಲಿರುತ್ತವೆ. ಆದ್ದರಿಂದ ಹೆಚ್ಚುವರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಅರ್ಹತೆ ಇರುವುದಿಲ್ಲ.

3) ಮೇಲಿನ ಉತ್ತರದಿಂದ ಪ್ರಶ್ನೆ ಉದ್ಭವಿಸುವುದಿಲ್ಲ